# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ 277 /23-24

ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 29. 2. 24

**ಕಛೇರಿ ಆದೇಶ**

ವಿಷಯ: ಶ್ರೀ ಹೆಚ್. ಕೆ. ಸೋಮಶೇಖರಪ್ಪ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಇವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ: 1)ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆ ಸಂಖ್ಯೆ: ನಅಇ 317 ಎಂ.ಎನ್.ಯು 2023 ದಿನಾಂಕ: 02-01-2024
2) ಸಂಖ್ಯೆ: ಬಿ12(6)ಪಿಆರ್/56/23-24, ದಿನಾಂಕ: 05-07-2023ರ ಸುತ್ತೋಲೆ

-----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತದ ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆಯಲ್ಲಿ ಶ್ರೀ ಹೆಚ್. ಕೆ. ಸೋಮಶೇಖರಪ್ಪ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ನಿಯೋಜನಗೊಂಡು ಹಾಲಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಯೋಜನೆ-ಪಶ್ಚಿಮ) ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರ ಸೇವೆಯನ್ನು ಮಾತೃ ಇಲಾಖೆಗೆ ಹಿಂದಿರುಗಿಸಿ ಆದದೇಶಿಸಿರುವುದರಿಂದ, ಸದರಿಯವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡ ಷರತ್ತಿಗೊಳಪಡಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಿ ಮಾತೃ ಇಲಾಖೆಗೆ ಹಿಂದಿರುಗಿಸಿ ಆದೇಶಿಸಿದೆ.

SOA
06/03/24

**ಷರತ್ತುಗಳು:-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
4. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್‌ಕಾರ್ಡ್, ಹೆಲ್ಮೆಟ್, ಗುರುತಿನ ಚೀಟಿ (Identity card) ಹಾಗೂ ಲ್ಯಾಪ್ ಟಾಪ್‌ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

ಉಪ ಮುಖ್ಯ ಮಾಹಿತಿ ಅಧಿಕಾರಿ (ಮಾಹಿತಿ ತಂತ್ರಜ್ಞಾನ) ರವರ ಕಛೇರಿ
ಸಂಖ್ಯೆ: 1522
ದಿನಾಂಕ: 06/03/24
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮೇಲ್ಕಂಡ ಆದೇಶದನ್ವಯ ಹಾಗೂ ಮಾನ್ಯ ಮುಖ್ಯ ಆಯುಕ್ತರು ರವರ ಉಲ್ಲೇಖ-(2)ರ ಸುತ್ತೋಲೆಯನ್ವಯ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವುದು.

29/2
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
29/2/2024 29/2/24

**ಪ್ರತಿಯನ್ನು :**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ಮಾನ್ಯ ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ.
: ಪ್ರಧಾನ ಅಭಿಯಂತರರು / ಮುಖ್ಯ ಅಭಿಯಂತರರು (ಗುಣನಿಯಂತ್ರಣ / ಗುಣಭರವಸೆ) ರವರಿಗೆ ಕಳುಹಿಸಿದೆ.
: ಉಪ ಮುಖ್ಯ ಮಾಹಿತಿ ಅಧಿಕಾರಿ, ಬಿ.ಬಿ.ಎಂ.ಪಿ ರವರಿಗೆ ಕಳುಹಿಸುತ್ತಾ, ಸದರಿಯವರು ಮೊಬೈಲ್ ಫೋನ್, ಮತ್ತು ಸಿಮ್ ಕಾರ್ಡ್ ಅನ್ನು ಪಾಲಿಕೆಗೆ ಹಿಂದಿರುಗಿಸಿರುವ ಬಗ್ಗೆ ದೃಢೀಕರಿಸಿಕೊಳ್ಳುವುದು.
: ಕಾರ್ಯಪಾಲಕಅಭಿಯಂತರರು (ಗುಣನಿಯಂತ್ರಣ / ಗುಣಭರವಸೆ) ವಿಭಾಗ ರವರಿಗೆ ಕಳುಹಿಸಿದೆ.
: ಮು.ಲೆ.ಅ / ಮು.ಲೆ.ಪ ರವರಿಗೆ ರವರಿಗೆ /ಉ.ನಿ (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.